ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು. ದಿನಾಂಕಃ 11.01.2024.

**<u>ಮುಂದುವರೆದ ಮುಖ್ಯ ವಿಚಾರಣೆಃ</u>** <u>ವಾದಿಯ ಪರ ವಕೀಲರಿಂದಃ</u>

ಇಂದು ನಾನು ದಾವೆಗೆ ಸಂಬಂಧಪಟ್ಟಂತೆ ಕೆಲವು ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ, ಅವುಗಳನ್ನು ನನ್ನ ಪರವಾಗಿ ಪರಿಗಣಿಸಬೇಕಾಗಿ ವಿನಂತಿಸಿಕೊಳ್ಳುತ್ತೇನೆ.

ದಿಃ 01.02.2020 ರ ಮೂಲ ನೋಂದಾಯಿತ ಮೃತ್ಯ ಪತ್ರವನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು, ದಿಃ 09.01.2020 ರಂದು ಆದ ಮೂಲ ವಿಲ್‌ನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

ಆದ್ದರಿಂದ ನಾನು ನನ್ನ ದಾವೆಯಲ್ಲಿ ಕೇಳಿದಂತೆ ಡಿಕ್ರಿ ಮಾಡಬೇಕೆಂದು ಮಾನ್ಯ ನ್ಯಾಯಾಲಯಕ್ಕೆ ಪ್ರಾರ್ಥಿಸಿಕೊಳ್ಳುತ್ತೇನೆ.

**<u>ಪಾಟೀ ಸವಾಲುಃ</u>** <u>ಪ್ರತಿವಾದಿ ಪರ ವಕೀಲರಿಂದಃ</u>

(ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರು ಪಾಟೀ ಸವಾಲು ಮಾಡಲು ಸಮಯ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

**ಹಿರಿಯ ಸಿವಿಲ್ ನ್ಯಾಯಾಧೀಶರು,**
**ಆಳಂದ.**